# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1538
ಸದಸ್ಯರ ಹೆಸರು : ಶ್ರೀ ಪ್ರದೀಪ್ ಶೆಟ್ಟರ್
ಉತ್ತರಿಸುವ ದಿನಾಂಕ : 24.09.2021.
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳಲ್ಲಿ 2020-21ನೇ ಸಾಲಿನಲ್ಲಿ ಡಾ॥ ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮಕ್ಕೆ ಪರಿಶಿಷ್ಟ ಜಾತಿ ವರ್ಗದವರಿಂದ ಕೊಳೆಬಾವಿ ಕೊರೆಯಲು ಸಲ್ಲಿಕೆಯಾಗಿರುವ ಅರ್ಜಿಗಳೆಷ್ಟು; (ವಿವರವನ್ನು ನೀಡುವುದು)</td><td>ಡಾ॥ ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮಕ್ಕೆ 2020-21 ನೇ ಸಾಲಿನಲ್ಲಿ ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಕೊಳವೆಬಾವಿ ಸೌಲಭ್ಯ ಕೋರಿ ಒಟ್ಟು 97 ಅರ್ಜಿಗಳು ಸಲ್ಲಿಕೆಯಾಗಿರುತ್ತವೆ. ವಿವರ ಈ ಕೆಳಕಂಡಂತಿದೆ.
<table>
<tr><th>ಕ್ರ.ಸಂ.</th><th>ಜಿಲ್ಲೆ</th><th>ಸಲ್ಲಿಕೆಯಾದ ಅರ್ಜಿಗಳು</th></tr>
<tr><td>01</td><td>ಧಾರವಾಡ</td><td>19</td></tr>
<tr><td>02</td><td>ಗದಗ</td><td>12</td></tr>
<tr><td>03</td><td>ಹಾವೇರಿ</td><td>66</td></tr>
<tr><td colspan="2">ಒಟ್ಟು</td><td>97</td></tr>
</table></td></tr>
<tr><td>ಆ)</td><td>ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳಲ್ಲಿ 2020-21ನೇ ಸಾಲಿನಲ್ಲಿ ಕೊಳವೆಬಾವಿ ಕೊರೆಯಲು ಅನುಮೋದನೆಯಾದ ಅನುದಾನದ ಮೊತ್ತವೆಷ್ಟು;</td><td>2020-21 ನೇ ಸಾಲಿನಲ್ಲಿ ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಕೊಳವೆಬಾವಿ ಕೊರೆಯಲು ಒಟ್ಟು ರೂ.220.33 ಲಕ್ಷಗಳ ಅನುದಾನ ಅನುಮೊದನೆಯಾಗಿದೆ. ವಿವರ ಈ ಕೆಳಕಂಡಂತಿದೆ.
<table>
<tr><th>ಕ್ರ.ಸಂ.</th><th>ಜಿಲ್ಲೆ</th><th>ಅನುಮೋದನೆಯಾದ ಅನುದಾನ (ರೂ. ಲಕ್ಷಗಳಲ್ಲಿ)</th></tr>
<tr><td>01</td><td>ಧಾರವಾಡ</td><td>68.50</td></tr>
<tr><td>02</td><td>ಗದಗ</td><td>67.10</td></tr>
<tr><td>03</td><td>ಹಾವೇರಿ</td><td>84.73</td></tr>
<tr><td colspan="2">ಒಟ್ಟು</td><td>220.33</td></tr>
</table></td></tr>
<tr><td>ಇ)</td><td>ಕೊಳವೆಬಾವಿ ಕೊರೆಯಲು ಸಲ್ಲಿಕೆಯಾಗಿರುವ ಅರ್ಜಿಗಳ ವಿಲೇವಾರಿಗೆ ನಿಗಮದಿಂದ ಯಾವ ರೀತಿಯಾದಂತಹ ಕ್ರಮ ಕೈಗೊಳ್ಳಲಾಗಿದೆ;</td><td>ಕೊಳವೆಬಾವಿ ಕೊರೆಯಲು ಸಲ್ಲಿಕೆಯಾಗುವ ಅರ್ಜಿಗಳನ್ನು ವಿಧಾನಸಭಾ ಕ್ಷೇತ್ರವಾರು ಪಟ್ಟಿ ಮಾಡಿ, ಆಯಾ ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರ ಅಧ್ಯಕ್ಷತೆಯ ಆಯ್ಕೆ ಸಮಿತಿಗೆ ಮಂಡಿಸಿ, ಆಯ್ಕೆ ಸಮಿತಿಯಲ್ಲಿ ಆಯ್ಕೆಯಾದ ಫಲಾಪೇಕ್ಷಿಗಳಿಗೆ ನಿಗಮದಿಂದ ನಿಯಮಾನುಸಾರ ಕೊಳವೆಬಾವಿ ಕೊರೆಯಲು ಕ್ರಮ ವಹಿಸಲಾಗುತ್ತಿದೆ.</td></tr>
<tr><td>ಈ)</td><td>ಈ ರೀತಿಯ ಅರ್ಜಿಗಳ ವಿಲೇವಾರಿಯನ್ನು ವಿಳಂಬ ಮಾಡಿ ಯೋಜನೆಯ ವಿಫಲತೆಗೆ ಕಾರಣವಾಗಿರುವ ಅಧಿಕಾರಿಗಳ ವಿರುದ್ಧ ಯಾವ ರೀತಿಯ ಕ್ರಮವನ್ನು ಕೈಗೊಳ್ಳಲಾಗಿದೆ?</td><td>ಅರ್ಜಿಗಳ ವಿಲೇವಾರಿಯನ್ನು ಅಧಿಕಾರಿಗಳಿಂದ ವಿಳಂಬ ಮಾಡಿ ಯೋಜನೆಯ ವಿಫಲತೆಗೆ ಕಾರಣವಾಗಿರುವುದು ಕಂಡುಬಂದಿರುವುದಿಲ್ಲ. ಕಂಡುಬಂದಲ್ಲಿ ನಿಗಮದಿಂದ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸಲಾಗುವುದು.</td></tr>
</table>

ಸಂಖ್ಯೆ: ಸಕಇ 455 ಎಸ್‌ಡಿಸಿ 2021

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಹಾಗೂ ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು.